ಪ-72
48

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಐವನ್ ಡಿ'ಸೋಜಾ ಇವರು ನಿಯಮ-72 ರಡಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಉತ್ತರ**

**ವಿಷಯ:** ನೀಟ್ ಪರೀಕ್ಷೆ ಮೂಲಕ ವೈದ್ಯಕೀಯ ಸೀಟುಗಳನ್ನು ವಿತರಿಸುವ ವಿಧಾನದಲ್ಲಿ ಪ್ರಭಾವಶಾಲಿ ಕಾಲೇಜುಗಳು ಸೀಟುಗಳನ್ನು ಬ್ಲಾಕ್ ಮಾಡಿ ಹಂಚಿಕೆಯಲ್ಲಿ ಅಕ್ರಮ ಉಂಟಾಗುವ ಬಗ್ಗೆ ವರದಿಗಳು ಪ್ರಕಟವಾಗುತ್ತಿದ್ದು, ಈ ಕ್ರಮದಿಂದ ವಿದ್ಯಾರ್ಥಿಗಳ ಭವಿಷ್ಯದ ಮೇಲೆ ಉಂಟಾಗುವ ಪರಿಣಾಮದ ಬಗ್ಗೆ ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

******

The Karnataka Professional Educational Institutions (Regulation of Admission and Determination of Fee) Act, 2006ರಲ್ಲಿ ಕಲ್ಪಿಸಿರುವ ಅವಕಾಶಗಳನ್ವಯ ಸರ್ಕಾರ ಮತ್ತು ಖಾಸಗಿ ವೈದ್ಯಕೀಯ ಸಂಸ್ಥೆಗಳ ಆಡಳಿತ ಮಂಡಳಿಗಳೊಂದಿಗೆ ಮಾಡಿಕೊಂಡ ಪರಸ್ಪರ ಒಡಂಬಡಿಕೆಯನ್ವಯ ಸೀಟುಗಳನ್ನು ಹಂಚಿಕೆ ಮಾಡಲಾಗುತ್ತಿದೆ.

ಸೀಟ್ ಬ್ಲಾಕಿಂಗ್ ವಿಚಾರವಾಗಿ ಪತ್ರಿಕೆಗಳಲ್ಲಿ ಪ್ರಸ್ತಾಪವಾದ ಅಂಶವನ್ನು ಗಮನಿಸಿ ಖಾಸಗಿ ವೈದ್ಯಕೀಯ ಕಾಲೇಜುಗಳಲ್ಲಿ ಆಗಬಹುದಾದ ಸೀಟ್ ಬ್ಲಾಕಿಂಗ್‌ನ್ನು ತಡೆಯುವ ಸಂಬಂಧ ಪ್ರಸ್ತುತ ಜಾರಿಯಲ್ಲಿರುವ ಕಾಯ್ದೆ ಮತ್ತು ನಿಯಮಗಳನ್ನು ಕೂಲಂಕಷವಾಗಿ ಅಧ್ಯಯನ ಮಾಡಿ ವರದಿ / ಸಲಹೆ ನೀಡುವ ಸಂಬಂಧ ಸಮಿತಿ ರಚಿಸಲಾಗಿತ್ತು. ಸದರಿ ಸಮಿತಿಯು ವರದಿಯನ್ನು ಸಲ್ಲಿಸಿದ್ದು, ಕಾಯ್ದೆ ಮತ್ತು ನಿಯಮಗಳಲ್ಲಿ ತಿದ್ದುಪಡಿ ತರುವ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಈ ಮೂಲಕ ವೈದ್ಯಕೀಯ ಸ್ನಾತಕ ಮತ್ತು ಸ್ನಾತಕೋತ್ತರ ಕೋರ್ಸುಗಳ ಸೀಟು ಹಂಚಿಕೆಯಲ್ಲಿ ಮತ್ತಷ್ಟು ಪಾರದರ್ಶಕತೆ ಮತ್ತು ಕಠಿಣ ನಿಯಮಗಳನ್ನು ಜಾರಿಗೆ ತಂದು ಅರ್ಹ ಪ್ರತಿಭಾನ್ವಿತ ವಿದ್ಯಾರ್ಥಿಗಳ ಹಿತಾಸಕ್ತಿಯನ್ನು ಕಾಪಾಡಲು ಕ್ರಮಕೈಗೊಳ್ಳಲಾಗುತ್ತದೆ.

**ಸಂಖ್ಯೆ:** ಎಂಇಡಿ/20/ಆರ್‌ಜಿಯು/2020

**(ಕೆ ಸುಧಾಕರ್)**
ವೈದ್ಯಕೀಯ ಶಿಕ್ಷಣ ಸಚಿವರು